ನೀರಿನ ಯೋಜನೆಗಳನ್ನು ಮತ್ತು 3 ಕಿರುನೀರು ಯೋಜನೆಗಳನ್ನು 1996-97ನೇ ಸಾಲಿನಲ್ಲಿ ಮುಗಿಸಬೇಕೆಂದು ಗುರಿ ನಿಗದಿಪಡಿಸಲಾಗಿದೆ.

ವಿಷಯ:- ಧಾರವಾಡ ಜಿಲ್ಲೆಯಲ್ಲಿ ಕೊಳವೆ ಬಾವಿಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 447 (646)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಧಾರವಾಡ ಜಿಲ್ಲೆಯಲ್ಲಿ ಇದುವರೆಗೆ ಕೊರೆದಿರುವ ಕೊಳವೆಬಾವಿಗಳು ಎಷ್ಟು?

2) ಇವುಗಳಲ್ಲಿ ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿರುವ ಕೊಳವೆ ಬಾವಿಗಳು ಎಷ್ಟು?

3) ಹಾಗಿದ್ದಲ್ಲಿ ಕೆಟ್ಟಿರುವ ಕೊಳವೆ ಬಾವಿಗಳನ್ನು ಕೂಡಲೆ ದುರಸ್ತಿಗೊಳಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):-

1) ಧಾರವಾಡ ಜಿಲ್ಲೆಯಲ್ಲಿ ಇದುವರೆವಿಗೂ ಒಟ್ಟು 9832 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ.

2) ಅವುಗಳಲ್ಲಿ ಒಟ್ಟು 7871 ಕೊಳವೆ ಬಾವಿಗಳು ತೃಪ್ತಿಕರವಾಗಿ ಕಾರ್ಯ ನಿರ್ವಹಿಸುತ್ತವೆ.

3) ಗ್ರಾಮೀಣ ಪ್ರದೇಶಗಳಲ್ಲಿ ದುರಸ್ತಿಗೆ ಬಂದಿರುವ ಕೊಳವೆ ಬಾವಿಗಳನ್ನು ಮತ್ತು ಕೈಪಂಪುಗಳನ್ನು ದುರಸ್ತಿ ಮಾಡಲು ಪ್ರತ್ಯೇಕವಾಗಿ ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ಸಂಚಾರಿ ವಾಹನಗಳನ್ನೊದಗಿಸಿ ನೇಮಿಸಲಾಗಿದೆ. ಈ ಸಿಬ್ಬಂದಿಯು ಕೈಪಂಪು ದುರಸ್ತಿ ಕಾರ್ಯವನ್ನು ಕೈಗೊಂಡು ಗ್ರಾಮೀಣ ಜನರಿಗೆ ಕುಡಿಯುವ ನೀರನ್ನು ಪೂರೈಸಲು ಕ್ರಮ ಕೈಗೊಳ್ಳುತ್ತಿದ್ದಾರೆ. ಅಲ್ಲದೆ, ಗ್ರಾಮ ಪಂಚಾಯತಿಯವರೂ ಸಹ ಕೈಪಂಪು ದುರಸ್ತಿ ಕಾರ್ಯ ಕೈಗೊಳ್ಳುವರು.

ವಿಷಯ:- ಧಾರವಾಡ ಜಿಲ್ಲೆಯಲ್ಲಿ ನಿರ್ಮಲ ಯೋಜನೆಯಡಿಯಲ್ಲಿ ಶೌಚಾಲಯಗಳ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 448 (646)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ):- ಮಾನ್ಯ ಗ್ರಾಮೀಣಾಭಿವೃದ್ಧಿ